SCCH – 01
HRC No.9/2024
PW1

**<u>ಸಾಕ್ಷಿಗೆ ದಿನಾಂಕ: 23.09.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು:</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.NL ರವರಿಂದ:</u>**

1) ನಾನು ಈ ಪ್ರಕರಣದಲ್ಲಿ **1** ನೇ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) ವಕೀಲರ ನೋಟೀಸಿನ ಕಚೇರಿ ನಕಲನ್ನು ನಿ.ಪಿ.**1** ಎಂದು, ಮತ್ತು ಅಂಚೆ ರಶೀದಿಗಳನ್ನು ನಿ.ಪಿ.**2** ಎಂದು, ಮತ್ತು ಜಾರಿ ಆಗದೇ ವಾಪಸ್ಸು ಬಂದಿರುವ ಅಂಚೆ ಕವರ್ ಅನ್ನು ನಿ.ಪಿ.**3** ಎಂದು ಗುರುತಿಸಿದೆ.

**<u>ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.